

# ಅಶ್ವಿನ್ ಕುಮಾರ್ ಜಿ



ಮೊದಲ ವರ್ಷದ ಬಿ.ಕಾಂ, "ಎ" ವಿಭಾಗ

21DJEC1011

## ಶಿಕ್ಷಕರು: ಡಾ.ಸತೀಶ್ ಎ.ಪಿ

# ಕನ್ನಡ ನಾಡು ನುಡಿ

- ಚಿಂತನೆ




# ಕನ್ನಡ ನಾಡು

- ಸಂಸ್ಕೃತಿಯ ನೆಲೆವೀಡು. ಇದು ಸಾಧಕರ ಕರ್ಮಭೂಮಿ. ನಾಡು – ನುಡಿ – ಸಂಸ್ಕೃತಿಗಳಿಗಾಗಿ ಸರ್ವಸ್ವದೊಂದಿಗೆ ಜೀವವನ್ನೂ ತೆತ್ತವರ ಮಣ್ಣಿದು. ಶತಮಾನಗಳ ಹಿಂದೆ ಮದರಾಸು ಸರಕಾರದ ವ್ಯಾಪ್ತಿಯಲ್ಲಿದ್ದುದರಿಂದ ಅಲ್ಲಿನ ಪ್ರಭಾವ, ನಂತರ ಕರ್ನಾಟಕದ ಪ್ರೇರಣೆ, ಅಲ್ಲಿಂದ ನಂತರ ಕೇರಳಕ್ಕೆ ಸೇರಿಕೊಂಡ ಬಳಿಕ ಮಲೆಯಾಳಂ ಮನೆ-ಮನಗಳ ಆವರಣ. ಹೀಗೆ ಭೌಗೋಳಿಕವಾಗಿ ಇಲ್ಲಿನ ಸಾಂಸ್ಕೃತಿಕ ಶ್ರೀಮಂತಿಕೆಗೆ – ಕಲಾವಂತಿಕೆಗೆ ಹಲವು ಮಜಲುಗಳು – ಕವಲುಗಳು. ಸುಸಂಸ್ಕೃತವಾದುದು, ಆರೋಗ್ಯಪೂರ್ಣವಾದುದು, ಸಕಾರಾತ್ಮಕವಾದುದು ಎಲ್ಲಿಂದ ಲಭಿಸಿದರೂ ನಮಗದು ಸ್ವೀಕೃತ. ಈ ಎಲ್ಲ ಅಂಶಗಳನ್ನು ಒಂದೇ ಕಡೆ ನೀಡುವ ನಮ್ಮ ಕನ್ನಡ ನಾಡು ಯತ್ನವಿದು.ಸೀಮಿತತೆಯ ನಡುವೆಯೂ ಸಂಸ್ಕೃತಿ-ಕಲೆಗಳ ಸುಗಂಧವನ್ನು ಬೀರುವ ವರಕರ್ಪೂರ ಕವಳದ ತಟ್ಟೆಯಿದು. ನೀವೂ ಮೆಚ್ಚಿಕೊಂಡ ಕಲಾ-ಸಾಂಸ್ಕೃತಿಕ ವಿಚಾರಗಳ ಕುರಿತು ಈ ಪುಟದಲ್ಲಿ ಬರೆಯಬಹುದು.

**ನವೆಂಬರ್ 1**, ಕನ್ನಡಿಗರಿಗೆಲ್ಲ ಸಂಭ್ರಮ ಮತ್ತು ಸಡಗರದ ದಿನ. ಹಾಗೆಯೇ ಕನ್ನಡ ನಾಡು-ನುಡಿಯ ಅಭಿವೃದ್ಧಿಯ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸುವ ದಿನವೂ ಆಗಿದೆ.

ಸರಿಸುಮಾರು ಎರಡೂವರೆ ಸಾವಿರ ವರ್ಷಗಳ ಸಾಂಸ್ಕೃತಿಕ ಇತಿಹಾಸವನ್ನು ಹೊಂದಿದ ಈ ಕನ್ನಡ ನಾಡನ್ನು ಶಾತವಾಹನ, ಗಂಗ, ಕದಂಬ, ಚಾಲುಕ್ಯ,ರಾಷ್ಟ್ರಕೂಟ ಹೊಯ್ಸಳ ಮುಂತಾದ ರಾಜವಂಶದವರು ಆಳುವುದಲ್ಲದೆ ರಾಷ್ಟ್ರದ ಇತಿಹಾಸದಲ್ಲಿ ತಮ್ಮ ಕೀರ್ತಿಗಾಥೆಯನ್ನು ಸುವರ್ಣಾಕ್ಷರಗಳಿಂದ ದಾಖಲಿಸಿದ್ದಾರೆ.





ಭಾಷೆ ಸಂವಾಹನದ ವಾಹಕ. ಅದು ಇಲ್ಲದೆ ಯಾವುದೇ ಒಂದು ಪ್ರಾಣಿ ಸಂವಾಹಿಸಲು ಸಾಧ್ಯವಿಲ್ಲ. ಮಾನವ ಇತರೆ ಪ್ರಾಣಿಗಳಿಗಿಂತ ಭಿನ್ನ ರೀತಿಯ ಸಂವಾಹನದ ಮೂಲಕ ಮತ್ತೊಬ್ಬ ಮಾನವನೊಡನೆ ಸಂವಾಹಿಸಲು ವಿಶಿಷ್ಟವಾದ ಭಾಷೆಗಳನ್ನು ರೂಪಿಸಿಕೊಂಡಿದ್ದಾನೆ. ಭಾಷೆಎಂಬುವುದು ಕೇವಲ ಸಂವಾಹನಕ್ಕೆ ಅವಶ್ಯವಾದ ಮಾಧ್ಯಮವೆ

ಆದರೂ, ವ್ಯಕ್ತಿಯ ಭಾವನೆಗಳು ಹೊರ ಹೊಮ್ಮಲು ಇರುವ ವಾಹಕವೂ ಸಹ ಆಗಿದೆ. ಪ್ರಪಂಚದಲ್ಲಿ, ಅನೇಕ ಜನರುನಿರ್ದಿಷ್ಟವಾದ

ಪ್ರದೇಶದೊಳಗೆ ಒಂದು ನಿರ್ದಿಷ್ಟವಾದ ಭಾಷೆಯ ಮೂಲಕ ದೈನಂದಿನಚಟುವಟಿಕೆಗಳಿಗಾಗಿ ಮಾತು, ಬರಹಗಳ ಮೂಲಕ ವ್ಯವಹರಿಸುತ್ತಿದ್ದಾರೆಇಂತಹ ಭಾಷೆಗಳಲ್ಲಿ ಕನ್ನಡವೂ ಸಹ ಒಂದು.

ನಾಡು' ಎಂದರೆ, ಒಂದು ಬೌಗೋಳಿಕ ಸೀಮೆ ಎಂದು. 'ನುಡಿ' ಎಂದರೆ, ಅಭಿವ್ಯಕ್ತಿಗೆ, ಹಾಗುತನ್ನಂತಿರುವ ಜೀವಿಯೊಡನೆ ಸಂವಾಹನಕ್ಕಾಗಿ ಬಳಸುವ ಮಾಧ್ಯಮ ಎಂದು. ಇಂತಹ ಮಾಧ್ಯಮಗಳಲ್ಲಿ ಒಂದು ದ್ರಾವಿಡ ಭಾಷೆಗಳಲ್ಲಿ ಬಹಳ ಹಳೆಯದರಲ್ಲಿ ಒಂದಾದ ಕನ್ನಡ ಭಾಷೆ. ಇಂದು ವಿವಿಧ ರೂಪಗಳಲ್ಲಿ ಸುಮಾರು ೪೫ ದಶಲಕ್ಷ ಜನರು ಆಡುನುಡಿಯಾಗಿ ಬಳಸುತ್ತಿದ್ದಾರೆ.

ನಮ್ಮ 'ಕನ್ನಡ' ಭಾಷೆಯು ಭಾರತದ ೨೨ ಅಧಿಕೃತ ಭಾಷೆಗಳಲ್ಲಿ ಒಂದಾಗಿದೆ. ಒಂದು ಬೌಗೋಳಿಕ ಎಲ್ಲೆಯೊಳಗೆ ಜನರು ಹೊಂದಿರುವ ಸಂಸ್ಕೃತಿ ಉಳಿಯ ಬೇಕೆಂದರೆ ಆ ಎಲ್ಲೆಯೊಳಗಿನ ಭಾಷೆ ಅಸ್ತಿತ್ವದಲ್ಲಿರಲೇಬೇಕು. ಕನ್ನಡ ಭಾಷೆ ಇಂದು ಇಂಗ್ಲೀಷಿನ ವ್ಯಾಪಕ ಬಳಕೆಯಿಂದಾಗಿ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿದೆ. ಈ ಪ್ರಬಂಧದಲ್ಲಿ ಕನ್ನಡ ನಾಡ ನುಡಿಯ ರಕ್ಷಣೆ, ಸವಾಲು ಮತ್ತು ವಿವಿಧ ಕ್ಷೇತ್ರಗಳಲ್ಲಿ ಕನ್ನಡದ ಬಳಕೆಯ ಬಗ್ಗೆ ಬರೆಯಲಾಗಿದೆ.



## ಕನ್ನಡ, ಕರುನಾಡು ಇತ್ತೀಚಿನದೆ?

ಕನ್ನಡ ನುಡಿಯನ್ನು ಆಡುಮಾತಾಗಿ ೨೫೦೦ ವರ್ಷಗಳಿಂದ ಬಳಸಲಾಗುತ್ತಿದೆ. ಕನ್ನಡ ಲಿಪಿ ಮತ್ತು ಬರೆಯುವ ಪದ್ಧತಿ ಸುಮಾರು ೧೯೦೦ ವರ್ಷಗಳ ಹಿಂದೆಯೇ ಇದ್ದಿತು. ಇನ್ನು ಕರುನಾಡು ಯಾವಾಗಿನಿಂದ ಇದೆ ನೀವೆ ಊಹಿಸಿಕೊಳ್ಳಿ. ಹಳೆಯ ಇಂಗ್ಲೀಷ್ ಭಾಷೆ ಸುಮಾರು ಕ್ರಿ.ಶ. ೧೦೦೦ ರಲ್ಲಿ ಜನರಿಂದ ಬಳಸಲ್ಪಡುತ್ತಿತ್ತು. ಬರಹದಲ್ಲಿ ಇಂಗ್ಲೀಷ್ ಪ್ರಭುದ್ದಮಾನಕ್ಕೆ ಬಂದಿದ್ದು ಎಷ್ಟೋ ವರ್ಷಗಳು ಕಳೆದ ಬಳಿಕ. ನಡು ಇಂಗ್ಲೀಷ್ ಕ್ರಿ.ಶ. 1400 ರಲ್ಲಿ ಆಡು ಮತ್ತು ಬರಹದ ರೂಪದಲ್ಲಿ ಬಳಸಲ್ಪಟ್ಟಿತು. ಆಧುನಿಕ ಇಂಗ್ಲೀಷ್ ೧೫ ಅಥವಾ ೧೬ ನೆ ಶತಮಾನದಿಂದೀಚೆಗೆ ಬಹುತೇಕ ರಾಷ್ಟ್ರಗಳಲ್ಲಿ ಜನರಿಂದ ವ್ಯವಹಾರಕ್ಕಾಗಿ, ಜ್ಞಾನಕ್ಕಾಗಿ, ತಾಂತ್ರಿಕ ಕಾರಣಗಳಿಗಾಗಿ, ಆಡಳಿತಕ್ಕಾಗಿ, ಮತ್ತು ಪರಸ್ಪರ ಸಂಬಂಧಹೊಂದುವ ಸಲುವಾಗಿ ಬಳಸಲ್ಪಡುತ್ತಿದೆ.

ಕನ್ನಡದ ಬಗ್ಗೆ ಹೇಳುವುದಾದರೆ, ಕನ್ನಡವು ದಕ್ಷಿಣ ಭಾರತದ ಭಾಷೆಗಳ ಮೂಲವೆಂದು ಗುರುತಿಸಲ್ಪಟ್ಟಿರುವ ಮೂಲ ದ್ರಾವಿಡದಿಂದ ಯಾವಾಗ ಆಡುಭಾಷೆಯಾಗಿ ಪರಿವರ್ತಿತವಾಯಿತೆಂದು ಖಚಿತವಾಗಿ ಹೇಳಲು ಅಸಾಧ್ಯ. ತಮಿಳು ಭಾಷೆಯು ದ್ರಾವಿಡ ಭಾಷೆಯಿಂದ ಬೇರ್ಪಟ್ಟ ಸಮಯದಲ್ಲಿಯೇ ಕನ್ನಡವು ಕೂಡ ಆಡುಭಾಷೆಯಾಗಿ

‘ಸಂಸ್ಕೃತಿ’ ಎಂಬ ಶಬ್ದದ ಅರ್ಥ ಬಹು ವ್ಯಾಪಕವಾಗಿ ಬೆಳೆಯುತ್ತ ಬಂದಿದೆ; ಹೊಸ ಹೊಸ ಅರ್ಥಗಳನ್ನು ಒಳಗೊಂಡಿದೆ. ಸಮಷ್ಟಿ ಜೀವನದ ಅಂತರಂಗದ ಸಾಧನೆಗೆ ಸಹಕಾರಿಯಾದ ಸಾಮಗ್ರಿಗಳಿಂದ ಹಿಡಿದು, ವ್ಯಷ್ಟಿ ಜೀವನದ ವಿಕಾಸಕ್ಕೆ ಕಾರಣವಾದ ಸಂಸ್ಕಾರದವರೆಗೆ ಈ ಪದದ ಅರ್ಥ ಬೆಳೆದಿದೆ. ವ್ಯಕ್ತಿಯ ವಿಕಾಸಕ್ಕೆ ಕಾರಣವಾಗುವ ಸಾಮಾಜಿಕ ಪರಿಕರಗಳು ಸಹ ಸಂಸ್ಕೃತಿಯಲ್ಲಿಯೇ ಸಮಾವೇಶಗೊಳ್ಳುತ್ತವೆ. ಈ ಅರ್ಥದಲ್ಲಿ ಅದನ್ನು ಕೆಲವು ವೇಳೆ ದೇಶವಾಚಕವಾಗಿ ಬಳಸುವುದುಂಟು. ಒಟ್ಟು ಜನಜೀವನದ ಅಂತರಂಗದ ಅನುಭವ ಇಲ್ಲಿ ಪ್ರಧಾನವಾದ ಅಂಶವಾಗಿ ಗೋಚರವಾಗುತ್ತದೆ. ಆಯಾ ಪ್ರದೇಶ, ಭಾಷೆ, ಧರ್ಮಗಳ ಜನರು ತಂತಮ್ಮ ಬಹುಮುಖ ಸಮಸ್ಯೆಗಳಿಗೆ ಉತ್ತರವನ್ನು ಕಾಣಬಯಸುವ ಅಂತರಂಗದ ಸಾಧನೆಯೇ ಸಂಸ್ಕೃತಿಯ ಮೂಲಸಾಮಗ್ರಿ.



ನಿಜವಾಗಿ ನೋಡಿದರೆ ಕರ್ನಾಟಕ ಸಂಸ್ಕೃತಿ ಎಂಬುದು ಭಾರತೀಯ ಸಂಸ್ಕೃತಿಗಿಂತ ಭಿನ್ನವಾದುದೇನಲ್ಲ. ಭರತಖಂಡದ ಒಂದು ಅವಿಭಾಜ್ಯ ಅಂಗವಾಗಿರುವ ಕರ್ನಾಟಕ ತನ್ನ ಆಶಯ ಆಶೋತ್ತರಗಳಲ್ಲಿ, ಅವುಗಳ ಸಾಧನೆಯ ಮಾರ್ಗದಲ್ಲಿ, ಅನುಭವದ ಅಭಿವ್ಯಕ್ತಿಯ ಮಾಧ್ಯಮವನ್ನು ರೂಪಿಸಿಕೊಳ್ಳುವ ಕುಶಲಕಲೆಯಲ್ಲಿ ಭಾರತೀಯ ಮನೋಧರ್ಮವನ್ನೇ ಅವಲಂಬಿಸಿ ಬೆಳೆಯಿತು. ಆದರೆ ಅದರ ಪ್ರಾದೇಶಿಕ ವೈವಿಧ್ಯಕ್ಕೆ ತನ್ನ ವಿಶಿಷ್ಟ ಸ್ವರೂಪವನ್ನಿತ್ತು ಅದರ ಶ್ರೀಮಂತಿಕೆಗೆ ಕಾರಣವಾಯಿತು.
ಕರ್ನಾಟಕವನ್ನಾಳಿದ ವಿವಿಧ ರಾಜವಂಶಗಳು, ಈ ನಾಡಿಗೆ ಬಂದ ಮತ್ತು ಇಲ್ಲಿಯೇ ಹುಟ್ಟಿ ಬೆಳೆದ ಧಾರ್ಮಿಕ ಆಂದೋಲನಗಳು, ಜನಪದವನ್ನು ಅವು ರೂಪಿಸಿದ ಬಗೆ, ಸಾಹಿತ್ಯ ಮತ್ತು ಜನಪದ ಸಾಹಿತ್ಯಗಳು ಪಡೆದ ಅಭಿವ್ಯಕ್ತಿ. ವಾಸ್ತುಶಿಲ್ಪ, ಶಿಲ್ಪ ಸಂಗೀತ ನೃತ್ಯ ಚಿತ್ರಾದಿ ಕುಶಲ ಕಲೆಗಳ ಸಾಧನೆ-ಈ ಎಲ್ಲ ಅಂಶಗಳಲ್ಲಿಯೂ ಕರ್ನಾಟಕದ ವೈಶಿಷ್ಟ್ಯವನ್ನು ಗುರುತಿಸಬಹುದು.
ಮುಖ್ಯವಾಗಿ ಇಲ್ಲಿ ಕಾಣುವುದು ಒಂದು ಸಮನ್ವಯ ಮತ್ತು ಸಾಮರಸ್ಯ ದೃಷ್ಟಿ.


ರಾಜಕೀಯ ಚರಿತ್ರೆಯನ್ನು ನೋಡಿದರೆ ಕದಂಬರು, ಗಂಗರು ಅಥವಾ ಅವರಿಗಿಂತ ಹಿಂದಿನ ಶಾತವಾನರಿಂದ ಹಿಡಿದು, ಕೆಳದಿ ಮೈಸೂರು ಅರಸರವರೆಗೂ ಎಲ್ಲ ರಾಜವಂಶಗಳೂ ಉದಾತ್ತ ಹಿನ್ನೆಲೆಯಲ್ಲಿಯೇ ಬೆಳೆದುಬಂದುವು. ತಮ್ಮ ಜಾತಿ ಮತ ಭಾವಗಳಲ್ಲಿ ಅಂಧರಾಗಿ ಇತರರನ್ನು ಹಿಂಸಿಸಲು ಹೊರಟ ರಾಜರು ಈ ದೀರ್ಘ ಇತಿಹಾಸದಲ್ಲಿ ಅಪ್ಪಿತಪ್ಪಿ ಕೂಡ ಕಾಣಸಿಗಲಾರರೆಂಬುದು ಗಮನಾರ್ಹವಾದ ಸಂಗತಿ. ಈ ನೆಲದ ಗುಣವೇ ಅದೆನ್ನುವಷ್ಟರ ಮಟ್ಟಿಗೆ ಸಮನ್ವಯ ಮತ್ತು ಸಾಮರಸ್ಯ ಭಾವನೆಯನ್ನು ಅವರು ರೂಪಿಸಿಕೊಂಡರು. ರಾಜರ ವೈಯಕ್ತಿಕ ಬಲವನ್ನು ಅವಲಂಬಿಸಿ ಒಂದೊಂದು ಕಾಲದಲ್ಲಿ ಒಂದೊಂದು ಧರ್ಮಕ್ಕೆ ಹೆಚ್ಚು ಪ್ರೋತ್ಸಾಹ ಸಿಕ್ಕಿರಬಹುದು. ಒಂದೇ ವಂಶದಲ್ಲಿಯೂ ಒಬ್ಬೊಬ್ಬ ರಾಜರು ಒಂದೊಂದು ಧರ್ಮಕ್ಕೆ ಹೆಚ್ಚಾಗಿ ಒಲಿಯುತ್ತಿದ್ದುದೂ ಉಂಟು. ರಾಷ್ಟ್ರಕೂಟ ರಾಜರಲ್ಲಿ ಅನೇಕರು ಹಿಂದೂ ಧರ್ಮವನ್ನು ಅದರಲ್ಲಿಯೂ ವಿಶೇಷವಾಗಿ ಶೈವಧರ್ಮವನ್ನು ಅವಲಂಬಿಸಿದ್ದರೆ, ನೃಪತುಂಗ ಜೈನ ಧರ್ಮಕ್ಕೆ ಮನಸೋತಿದ್ದ. ಹೊಯ್ಸಳ ಒಂದನೇ ಬಲ್ಲಾಳ ಶೈವನಾದರೆ, ಅವನ ತಮ್ಮ ವಿಷ್ಣುವರ್ಧನ ವೈಷ್ಣವ. ಅದು ಅವರ ವೈಯಕ್ತಿಕ ಒಲವು. ಆದರೆ ಸಾರ್ವತ್ರಿಕವಾಗಿ ಅವರು ಸರ್ವಧರ್ಮ ರಕ್ಷಕರೆಂಬುದನ್ನು ಮರೆತಿರಲಿಲ್ಲ. ಹೆಚ್ಚೆಂದರೆ ತಾವು ಒಲಿದ ಧರ್ಮಕ್ಕೆ ಸ್ವಲ್ಪ ಹೆಚ್ಚು ಪ್ರೋತ್ಸಾಹ ಕೊಟ್ಟಿರಬಹುದು. ಆದರೆ ಇತರ ಧರ್ಮಗಳ ಮೇಲೆ ದ್ವೇಷವನ್ನು ಸಾಧಿಸಿದ ದುರ್ಘಟನೆ ಕರ್ನಾಟಕ ರಾಜಕೀಯದ ಇತಿಹಾಸದಲ್ಲಿ ಒಮ್ಮೆಯೂ ಸಂಭವಿಸಲಿಲ್ಲ. ಚಾಳಕ್ಯರು, ಗಂಗರು, ಹೊಯ್ಸಳರು, ವಿಜಯನಗರದ ಅರಸರು, ಕೆಳದಿಯ ನಾಯಕರು- ಈ ಎಲ್ಲ ಅರಸುಮನೆತನಗಳಿಗೂ ಈ ಮಾತನ್ನು ಅನ್ವಯಿಸಬಹುದು.ರಾಜಕೀಯ ಚರಿತ್ರೆಯಲ್ಲಿ ಉದ್ದಕ್ಕೂ ಕಾಣುವ ಒಂದು ಪ್ರಧಾನವಾದ ಅಂಶವೆಂದರೆ ಯುದ್ಧಗಳು. ಇದು ಕರ್ನಾಟಕಕ್ಕೆ ಮಾತ್ರವಲ್ಲ. ಇಡೀ ಭರತಖಂಡಕ್ಕೆ ಅಥವಾ ಪ್ರಾಚೀನ ಪ್ರಪಂಚಕ್ಕೆಲ್ಲ ಅನ್ವಯಿಸುವ ಮಾತು. ಅಂದಿನ ರಾಜಕೀಯ ವ್ಯವಸ್ಥೆಯಲ್ಲಿ ಅದು ಅನಿವಾರ್ಯವಾಗಿತ್ತು. ಇಂಥ ವೀರಜೀವನದಲ್ಲಿಯೂ ಕರ್ನಾಟಕದ ಸಾಧನೆ ಅನುಪಮವಾದುದು. ಅಖಿತ ಭಾರತ ವ್ಯಾಪ್ತಿಯ ಮನ್ನಣೆಯನ್ನು ಪಡೆದಂಥ ವೀರರು ಈ ನಾಡಿನಲ್ಲಿ ಆಗಿಹೋದರು. ಕದಂಬ ವಂಶದ ಸ್ಥಾಪಕನಾದ ಮಯೂರಶರ್ಮನಿಂದ ಹಿಡಿದು ಅವಿರತವಾಗಿ ಬೆಳೆದುಬಂದ ಈ ವೀರ ಪರಂಪರೆಯಲ್ಲಿ ಕೆಲವು ಹೆಸರುಗಳನ್ನು ಸ್ಮರಿಸಿಕೊಳ್ಳಬಹುದಾದರೆ ಎರಡನೆಯ ಪುಲಕೇಶಿ, ಧ್ರುವ ಧಾರಾವರ್ಷ, ಮೂರನೆಯ ಗೋವಿಂದ, ಆರನೆಯ ವಿಕ್ರಮ, ವಿಷ್ಣುವರ್ಧನ, ಎರಡನೆಯ ಬಲ್ಲಾಳ, ಮುಮ್ಮಡಿ ಬಲ್ಲಾಳ, ಕುಮಾರರಾಮ, ಇಮ್ಮಡಿ ಪ್ರೌಢದೇವರಾಯ, ಕೃಷ್ಣದೇವರಾಯ-ಈ ಒಂದೊಂದು ಹೆಸರೂ ಪರಾಕ್ರಮದ ಸಂಕೇತವಾಗಿದೆ.




- ಕನ್ನಡ ಕವಿಗಳು ಅಂದರೆ ಕನ್ನಡ ನುಡಿಯಲ್ಲಿ ಕಾವ್ಯ /ಸಾಹಿತ್ಯ ರಚನೆ ಮಾಡಿದವರು ಹಾಗೂ ಕನ್ನಡ ನಾಡು ನುಡಿ ಚರಿತ್ರೆಯನ್ನು ಬರೆದು ಸಾಹಿತ್ಯದ ಕಥೆ, ಕವನ,ಹಾಡು,ಹರಟೆ, ಪ್ರಬಂಧ, ಪ್ರವಾಸ ಕಥನ ಇತರೆ ಎಲ್ಲಾ ಪ್ರಕಾರಗಳಲ್ಲಿ ರಚಿಸುವರನ್ನು ಕವಿಗಳು ಎಂದು ಕರೆಯಲಾಗಿದೆ. ಕನ್ನಡ ಸಾಹಿತ್ಯದ ಹುಟ್ಟಿಯಿಂದಲೂ ಬೆಳೆದು ಬದುಕಿರುವ ಇಲ್ಲಿಯವರೆಗೆ ಅಂದರೆ ದುರ್ವಿನೀತ, ಶ್ರೀವಿಜಯ, ಪಂಪನಿಂದ ಹಿಡಿದು ಇಂದಿನವರೆಗೆ ನೂರಾರು ಕನ್ನಡ ಕವಿಗಳು ಕನ್ನಡ ಸಾಹಿತ್ಯಕ್ಕೆ ಭವ್ಯ ಮೆರಗು ಕೊಡುಗೆಗಳನ್ನು ನೀಡಿದ್ದಾರೆ. ಅವರ ಪರಿಚಯ ಮಾಡಿಕೊಡುವ ಸಣ್ಣ ಪ್ರಯತ್ನ ಈ ಬರಹದು.

# ಕನ್ನಡ ಸಾಧಕರು

## ಕುವೆಂಪು



**ಕನ್ನಡ ಡಿಂಡಿಮ ಮೊಳಗಿಸಿದ ರಸಋಷಿ ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ**

•ಕನ್ನಡ ಎನೆ ಕುಣಿದಾಡುವುದೆನ್ನೆದೆ
ಕನ್ನಡ ಎನೆ ಕಿವಿ ನಿಮಿರುವುದು....

•ಎಲ್ಲಾದರು ಇರು ಎಂತಾದರೂ ಇರು
ಎಂದೆಂದಿಗೂ ನೀ, ಕನ್ನಡವಾಗಿರು...

•ಬಾರಿಸು ಕನ್ನಡ ಡಿಂಡಿಮವ
ಓ ಕರ್ನಾಟಕ ಹೃದಯ ಶಿವ ಬಾರಿಸು ಕನ್ನಡ ಡಿಂಡಿಮವ...

•ಜಯ ಭಾರತ ಜನನಿಯ ತನುಜಾತೇ..
ಜಯಹೇ ಕರ್ನಾಟಕ ಮಾತೆ...

ಕುವೆಂಪು ಎಂಬ ಮೂರಕ್ಷರದಿಂದಲೇ ಕನ್ನಡಿಗರ ಮನೆ ಮಾತಾದ ರಾಷ್ಟ್ರಕವಿ ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ ಕನ್ನಡದ ಮಹಾನ್ ಚೇತನ. ಕನ್ನಡ- ಕರ್ನಾಟಕದ ಬಗ್ಗೆ ಅವರು ಬರೆದಿರುವ ಭಾವಗೀತೆಗಳು ನಿತ್ಯ ನೂತನ. ಮನುಜ ಮತ ವಿಶ್ವಪಥವನ್ನು ಸಾರಿದ ಈ ಸಾಹಿತ್ಯ ಶ್ರೇಷ್ಠ ವಿಶ್ವಮಾನವರೆನಿಸಿದವರು.

ಕುವೆಂಪು ಹೊಸಗನ್ನಡ ಸಾಹಿತ್ಯದ ಹಿರಿಯ ಕವಿ. ಕನ್ನಡ ಸಾಹಿತ್ಯವನ್ನು ವಿಶ್ವ ಸಾಹಿತ್ಯ ವೇದಿಕೆಗೆ ಕೊಂಡೊಯ್ದ ವಿಶ್ವಮಾನವ.

ಮಹಾಕಾವ್ಯ, ನಾಟಕ, ಖಂಡಕಾವ್ಯ, ಕಥನಕಾವ್ಯ, ಭಾವಗೀತೆಯೇ ಮೊದಲಾದ ಹಲವು ಪ್ರಕಾರಗಳಲ್ಲಿ ಅತ್ಯುತ್ತಮ ಕೃತಿಗಳನ್ನು ನೀಡಿದ ಅದ್ವರ್ಯು. ಕುವೆಂಪು ಅವರಂತೆ ಸರ್ವ ಪ್ರಕಾರಗಳಲ್ಲೂ ಏಕ ಪ್ರಕಾರವಾದ ಸಿದ್ಧಿ ಪಡೆದ ಕವಿಗಳು ಅತಿ ವಿರಳ.

# ಮಾಸ್ತಿ ವೆಂಕಟೇಶ ಅಯ್ಯಂಗಾರ್



ಸಣ್ಣ ಕತೆಗಳ ಜನಕ ಎಂದೇ ಖ್ಯಾತರಾದ ಮಾಸ್ತಿ, ಕನ್ನಡ ಸಾಹಿತ್ಯದಲ್ಲಿ ಕಥಾ ಪ್ರಕಾರಕ್ಕೆ ಹೊಸ ಆಯಾಮ ನೀಡಿದ ಮಾನವ ಅಂತಸ್ಥ ಜಗತ್ತಿನ ಶೋಧಕ, ಇಂದು ಮಾಸ್ತಿ ಬಹುಕಿದ್ದಿದ್ದರೆ ಅವರಿಗೆ ೧೧೧ ವರ್ಷ ತುಂಬುತ್ತಿತ್ತು. ಇಂದು ಮಾಸ್ತಿ ನಮ್ಮ ಮುಂದಿಲ್ಲ ಆದರೆ,ಅವರ ಬದುಕು- ಬರಹ ಚಿರಸ್ಥಾಯಿಯಾಗಿದೆ.

ಮಾಸ್ತಿ ಅವರು ಕೇವಲ ಕವಿಯಲ್ಲ, ಸಂಸ್ಕೃತಿಯ ಪ್ರತಿಪಾದಕರೂ ಹೌದು. ಶಿಸ್ತುಬದ್ಧ ಜೀವನ ಎಂದರೇನು ಎಂಬುದನ್ನು ಮಾಸ್ತಿ ಅವರನ್ನು ನೋಡಿ ಕಲಿಯಬೇಕು ಎಂದು ಅವರನ್ನು ಹತ್ತಿರದಿಂದ ಬಲ್ಲವರು ಹೇಳುತ್ತಿದ್ದರು. ನಿತ್ಯ ಮನೆಯಲ್ಲಿ ನಿಗದಿತ ಸಮಯಕ್ಕೆ ಸರಿಯಾಗಿ ವಿಷ್ಣು ಸಹಸ್ರನಾಮ ಹೇಳದೆ, ಮನೆ ಮಂದಿಯಿಂದ ಹೇಳಿಸದೇ ಅವರು ಹೊರ ಹೋಗುತ್ತಿರಲಿಲ್ಲ. ಹಾಗೆಂದ ಮಾತ್ರಕ್ಕೆ ಅವರು ಧರ್ಮಾಚರಣೆಯ ಮೂಲಕ ಸಂಸ್ಕೃತಿಯ ಪ್ರತಿಪಾದಕರಾಗಿ ನಿಲ್ಲಲಿಲ್ಲ. ಬದುಕಿನಲ್ಲಿ ಸಂಸ್ಕೃತಿಯನ್ನು ಮೈಗೂಡಿಸಿಕೊಂಡು ಪರಿಪಕ್ವವಾಗುವುದು ಹೇಗೆ ಎಂಬುದನ್ನು ಮಾಸ್ತಿ ಅವರು ತಮ್ಮ ಕೃತಿಗಳ ಮೂಲಕ ಸಾರಿದರವರು.

ತಮ್ಮ, ಕಥೆ, ಕಾದಂಬರಿಗಳ ಮೂಲಕ ತಮ್ಮ ಅನ್ವೇಷಣೆಗಳನ್ನು ಓದುಗರಿಗೆ ತಿಳಿಯ ಹೇಳಿದವರು.

ಮಾಸ್ತಿ ಅವರು ಮಾನವನ ಅಂತರಂಗದ ಅತೀತ ಮೂಲಗಳಲ್ಲಿ ಸಂಚರಿಸಿದ್ದರಿಂದಲೇ ಅವರ ಸಾಹಿತ್ಯ ಕಾಲದ ಪರಿಕಲ್ಪನೆಯಿಂದ ವೈಶಿಷ್ಟ್ಯಪೂರ್ಣವಾಗಿವೆ. ಮಾಸ್ತಿಯವರ ಸಾಹಿತ್ಯದಲ್ಲಿ ಅತ್ಯಂತ ರಹಸ್ಯವಾದ ಮುಷ್ಟಿಗ್ರಾಹ್ಯವಲ್ಲದ ನೆಲೆಯೆಂದರೆ ಮಾನವನೇ. ಮಾನವನ ಧಾರಣಾಶಕ್ತಿ, ಅತೀಂದ್ರಿಯಾತ್ಮಕ ವಿಷಯಗಳನ್ನು ಅನಾಯಾಸವಾಗಿ ಬಣ್ಣಿಸಿರುವ ಮಾಸ್ತಿ ಅವರು, ಮನುಷ್ಯನಲ್ಲಿ ಅಂತಸ್ಥವಾಗಿರುವ ಶಕ್ತಿಯನ್ನು ಶೋಸಿದವರು.

# ಧನ್ಯವಾದಗಳು

